1074 ಶ್ರೀ ವಿಶ್ವನಾಥ್ ಎಸ್.ಆರ್. : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೀಲಗಿರಿ ಮರಗಳನ್ನು ಬೆಳೆಸುವುದನ್ನು ನಿಷೇಧಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ನೀಲಗಿರಿ ಮರಗಳ ಸಾಕಾಣಿಕೆಯಿಂದ ಜಲಮಟ್ಟ, ಪರಿಸರ ಹಾಳಾಗುತ್ತಿದ್ದು, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಇಂತಹ ಯಾವುದೇ ಪ್ರಸ್ತಾವ ಸರ್ಕಾರದ ಮುಂದಿರುವುದಿಲ್ಲ.

ಆ) ನೀಲಗಿರಿ ಮರಗಳ ಸಾಕಾಣಿಕೆಯಿಂದ ಪರಿಸರಕ್ಕೆ ಪ್ರತಿಕೂಲ ಪರಿಣಾಮ ಉಂಟಾಗುತ್ತಿರುವ ಬಗ್ಗೆ ಯಾವುದೇ ನಿರ್ಣಯಾತ್ಮಕ ವೈಜ್ಞಾನಿಕ ಆಧಾರಗಳಿರುವುದಿಲ್ಲ. ಅರಣ್ಯ ಇಲಾಖೆಯು ಅರಣ್ಯ ಪ್ರದೇಶದಲ್ಲಿ ನೀಲಗಿರಿ ಮರಗಳನ್ನು ಬೆಳೆಸುತ್ತಿಲ್ಲ ಮತ್ತು ನೀಲಗಿರಿ ಸಸಿಗಳನ್ನು ರೈತರಿಗೆ ವಿತರಣೆ ಮಾಡುತ್ತಿಲ್ಲ.

1107 ಶ್ರೀ ಅಮರೇಶ್ (ಮುಳಬಾಗಿಲು) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಳಬಾಗಿಲು ಪುರಸಭೆಗೆ 2005–06ನೇ ಸಾಲಿನಿಂದ 2009–10ನೇ ಸಾಲಿನ ವರೆಗೆ ಯೋಜನೆವಾರು ಬಿಡುಗಡೆಯಾದ ಅನುದಾನವೆಷ್ಟು; ಬಳಕೆಯಾಗಿರುವ ಅನುದಾನವೆಷ್ಟು;

ಆ) ಅನುದಾನ ಸರಿಯಾಗಿ ಬಳಕೆಯಾಗದೇ ಇರುವುದು ಮತ್ತು ಕಾಮಗಾರಿಗಳ ಗುಣಮಟ್ಟ ಕಾಪಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ತಪ್ಪಿತಸ್ಥ ಅಧಿಕಾರಿಗಳು ಮತ್ತು ಗುತ್ತಿಗೆದಾರರ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು) :

ಅ) 2005–06ನೇ ಸಾಲಿನಿಂದ 2009–10ನೇ ಸಾಲಿನವರೆಗೆ ಯೋಜನೆವಾರು ಬಿಡುಗಡೆಗೊಳಿಸಲಾದ ಅನುದಾನ ಕೆಳಗಿನಂತಿರುತ್ತದೆ.

9-14